## 2. ಡಿಕೆಶಿ ವರ್ಚುವಲ್ ವಿಶ್ವದಾಖಲೆ

ರಾಜಕೀಯ ಪಕ್ಷವೊಂದರ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮ ಯಾವುದೇ ಗೋಜಲು ಗೊಂದಲಗಳಿಲ್ಲದೆ ರಾಜ್ಯದ ಸುಮಾರು 19,000 ಕಡೆಗಳಲ್ಲಿ ಸುಮಾರು 40 ಲಕ್ಷ ಕಾರ್ಯಕರ್ತರು ಏಕಕಾಲಕ್ಕೆ ಪಾಲ್ಗೊಂಡು ಯಶಸ್ವಿಗೊಳಿಸಿರುವುದು ದಾಖಲೆಯಾಗಿದೆ.

ಕೊರೋನಾ ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ಬೃಹತ್ ಸಮಾವೇಶದ ಬದಲು ಆನ್‌ಲೈನ್ ಮೂಲಕ ಅಷ್ಟೇ ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮವನ್ನು ಸಂಘಟಿಸಿದ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ್ದಾರೆ. ಕೆಪಿಸಿಸಿಯ ಇನ್ನೂ ಅಧಿಕೃತವಾಗಿ ಉದ್ಘಾಟನೆಯಾಗದ ನೂತನ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಪದಗ್ರಹಣ 'ಪ್ರತಿಜ್ಞಾ' ಕಾರ್ಯಕ್ರಮ ಮೂರು ಗಂಟೆಗಳ ಕಾಲ ಯಾವುದೇ ತಾಂತ್ರಿಕ ಅಡಚಣೆ ಇಲ್ಲದೆ ಸರಾಗವಾಗಿ ನಡೆಯಿತು. ರಾಜ್ಯ ಸರ್ಕಾರ ಸೂಚಿಸಿದಂತೆ, ಸಾಮಾಜಿಕ ಅಂತರಕ್ಕೆ ಧಕ್ಕೆಯಾಗದಂತೆ ನಿಯಮಿತ ಸಂಖ್ಯೆಯಲ್ಲಿ ನಿರ್ದಿಷ್ಟ ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡು, ರಾಜಕೀಯ ಪಕ್ಷವೊಂದರ ವರ್ಚುವಲ್ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಮಾಡಿ, ತಲುಪಬೇಕಾದ ಜನರನ್ನು ತಲುಪಬಹುದು ಎನ್ನುವುದನ್ನು ಕಾರ್ಯಕ್ರಮ ಸಾಕ್ಷೀಕರಿಸಿತು.

**ಪಕ್ಷ ಸಂಘಟನೆ ಪ್ರತಿಜ್ಞೆ :** ಪಕ್ಷದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ನಂತರ ಪ್ರತಿಜ್ಞೆ ಸ್ವೀಕರಿಸಿದ ಡಿ.ಕೆ.ಶಿವಕುಮಾರ್, "ನಾನು ಭಾರತೀಯ ಕಾಂಗ್ರೆಸ್‌ನ ನಿಷ್ಠಾವಂತ ಕಾರ್ಯಕರ್ತನಾಗಿದ್ದು, ನಮ್ಮ ದೇಶದ ಸಂವಿಧಾನಕ್ಕೆ ಸದಾ ಬದ್ಧನಾಗಿರುತ್ತೇನೆ, ಪಕ್ಷ ನನಗೆ ವಹಿಸುವ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿ, ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡಿ ಕಾಂಗ್ರೆಸ್ ಪಕ್ಷವನ್ನು ಕೇಡರ್ ಆಧಾರಿತ ಪಕ್ಷವನ್ನಾಗಿ ಪರಿವರ್ತಿಸಲು ದುಡಿಯುತ್ತೇನೆ. ರಾಜ್ಯದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ದೃಢ ಸಂಕಲ್ಪ ಮಾಡುತ್ತೇನೆ. ಇದು ನನ್ನ ಪ್ರತಿಜ್ಞೆ ಎಂದು ಘೋಷಿಸಿದರು. ಅವರೊಂದಿಗೆ ರಾಜ್ಯಾದ್ಯಂತ ಕಾರ್ಯಕ್ರಮದಲ್ಲಿ ಆನ್‌ಲೈನ್ ಮೂಲಕ ಭಾಗಿಯಾಗಿದ್ದ ಎಲ್ಲ ಕಾಂಗ್ರೆಸ್ ಕಾರ್ಯಕರ್ತರೂ ಏಕಕಾಲಕ್ಕೆ ಪ್ರತಿಜ್ಞೆ ಕೈಗೊಂಡರು.

**ಶುಭಾಶಯ ಕೋರಿದ ರಾಹುಲ್ ಗಾಂಧಿ:–** ಕಾರ್ಯಕ್ರಮದ ವೇಳೆಯೇ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರು ಡಿ.ಕೆ ಶಿವಕುಮಾರ್‌ಗೆ ಕರೆ ಮಾಡಿ ಶುಭಾಶಯ ಕೋರಿದರು. ಕರ್ನಾಟಕ ಕಾಂಗ್ರೆಸ್‌ಗೆ ಅಭಿನಂದನೆಗಳು. ಡಿ.ಕೆ.ಶಿವಕುಮಾರ್ ಅವರು ಕೋವಿಡ್ ಹಾಗೂ ಆರ್ಥಿಕ ಬಿಕ್ಕಟ್ಟಿನಂತಹ ಸಂಕಷ್ಟದ ಸಮಯದಲ್ಲಿ ಕರ್ನಾಟಕ ಜನರ ಹಿತಾಸಕ್ತಿಗೆ ಬದ್ಧರಾಗಿ, ಅದರಲ್ಲೂ ದುರ್ಬಲ ವರ್ಗದವರ ಕಲ್ಯಾಣಕ್ಕಾಗಿ ಕೆಲಸ ಮಾಡಲಿದ್ದಾರೆ ಎಂದು ಭಾವಿಸುತ್ತೇನೆ. ಪಕ್ಷದ ಯಶಸ್ವಿಗಾಗಿ ಎಲ್ಲರೂ ಶ್ರಮಿಸಬೇಕು. ಡಿ.ಕೆ.ಶಿವಕುಮಾರ್ ಅವರು ಪ್ರತಿಯೊಬ್ಬ ಕಾಂಗ್ರೆಸಿಗನನ್ನು ಜೊತೆಯಲ್ಲಿ ಕರೆದುಕೊಂಡು ಹೋಗಬೇಕಿದ್ದು, ಅವರು ಅದನ್ನು ಮಾಡಲಿದ್ದಾರೆ ಎಂಬ ನಂಬಿಕೆ ಇದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಅವರು ಶುಭಾಶಯ ಕೋರುವುದನ್ನು ಮೈಕ್‌ನಲ್ಲಿ ಕೇಳಿಸುವ ಮೂಲಕ ಅವರ ಸಂದೇಶ ಪಕ್ಷದ ಎಲ್ಲ ಕಾರ್ಯಕರ್ತರಿಗೆ ತಲುಪುವಂತೆ ಮಾಡಲಾಯಿತು.

**ಸಾಮೂಹಿಕ ನಾಯಕತ್ವದ ಮೇಲೆ ನನಗೆ ನಂಬಿಕೆ:–**

ಸಾಮೂಹಿಕ ನಾಯಕತ್ವ ಪರಿಕಲ್ಪನೆಯಲ್ಲಿ ನಂಬಿಕೆ ಇಟ್ಟಿದ್ದು, ಯಾವುದೇ ಜಾತಿ ಧರ್ಮ ಭೇದಭಾವ ಮಾಡುವುದಿಲ್ಲ. ಪಕ್ಷದಲ್ಲಿ ಗುಂಪುಗಾರಿಕೆ ಸಹಿಸುವುದಿಲ್ಲ. ಪಕ್ಷ ತೊರೆದು ಹೋಗುತ್ತೇನೆಂದು ಬೆದರಿಕೆ ಹಾಕುವವರಿಗೆ ಬಗ್ಗುವುದಿಲ್ಲ ಎಂದು ಕೆಪಿಸಿಸಿ ನೂತನ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ವರ್ಚುವಲ್ ಸಮಾವೇಶ ಮೂಲಕ ನಡೆದ ಐತಿಹಾಸಿಕ ಪ್ರತಿಜ್ಞಾ ಕಾರ್ಯಕ್ರಮದಲ್ಲಿ ಅಧಿಕಾರ ಸ್ವೀಕರಿಸಿದ ಅವರು, ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಪಕ್ಷವನ್ನು ಸಂಘಟಿಸುವ ಹಾಗೂ ಅಧಿಕಾರಕ್ಕೆ ತರುವ ಪ್ರತಿಜ್ಞೆ ಮಾಡಿದರು.

ಈ ಸಂದರ್ಭದಲ್ಲಿ ಭಾವುಕರಾಗಿ ಮಾತಾನಾಡಿದ ಅವರು, ಇದೊಂದು ಐತಿಹಾಸಿಕ ದಿನ ನನ್ನ ಪಾಲಿಗೆ, ರಾಜ್ಯದ ಎಲ್ಲ ಕಾಂಗ್ರೆಸಿಗರು, ಕನ್ನಡ ನಾಡಿನ ಜನರಿಗೆ ಇದೊಂದು ವಿಶೇಷ ದಿನ ಎಂದರು. ನಾನು ಯಾವುದೇ ನಿರ್ಧಾರ ಕೈಗೊಂಡರೂ ಸಾಮೂಹಿಕವಾಗಿ ಚರ್ಚಿಸಿ ನಂತರ ತೀರ್ಮಾನಿಸುತ್ತೇನೆ. ವೈಯುಕ್ತಿಕ ತೀರ್ಮಾನ ಕೈಗೊಳ್ಳುವುದಿಲ್ಲ. ನಾನು ವೈಯುಕ್ತಿಕ ನಾಯಕತ್ವಕ್ಕಿಂತ ಸಾಮೂಹಿಕ ನಾಯಕತ್ವದ ಮೇಲೆ ನಂಬಿಕೆ ಇಟ್ಟವನು. ಜೊತೆಗೂಡುವುದು ಆರಂಭ, ಜೊತೆಗೂಡಿ ಯೋಚಿಸುವುದು ಪ್ರಗತಿ, ಜೊತೆಗೂಡಿ ಕೆಲಸ ಮಾಡುವುದು ಯಶಸ್ಸು

ಎಂಬುದನ್ನು ನಂಬಿರುವವನು, ಈ ಎಲ್ಲಾ ಸಂಘಟನೆಗಳಿಂದ ನಾವು ಶಕ್ತಿ ನೀಡದಿದ್ದರೆ ಗುರಿ ಸಾಧಿಸಲು ಸಾಧ್ಯವಿಲ್ಲ. ನಮ್ಮ ಪಕ್ಷವನ್ನು ಮಾಸ್ ಬೇಸ್‌ನಿಂದ ಕೇಡರ್ ಬೇಸ್ ಪಾರ್ಟಿಯಾಗಿ ಪರಿವರ್ತಿಸಬೇಕಿದೆ. ಯಾವುದೇ ನಾಯಕನಾದರೂ ಆತ ಬೂತ್ ಮಟ್ಟದಿಂದ ಪ್ರತಿನಿಧಿಸಬೇಕು. ಇದಕ್ಕೆ ಕೇರಳ ಮಾಡೆಲ್ ಪ್ರೇರಣೆ. ನಾವೆಲ್ಲರೂ ಸೇರಿ ಎಲ್ಲರಿಗೂ ಸ್ಥಾನಮಾನ ಸಿಗುವಂತೆ ಕಾರ್ಯಕ್ರಮ ರೂಪಿಸೋಣ ಎಂದು ಹೇಳಿದರು.

ಮಾಜಿ ಪ್ರಧಾನಿ ರಾಜೀವ್ ಗಾಂಧಿ ಯುವ ಶಕ್ತಿಯ ಮೇಲೆ ಅಪಾರ ನಂಬಿಕೆ ಇಟ್ಟಿದ್ದರು. ರಾಜೀವ್ ಗಾಂಧಿ ಅವರು ಮತದಾನದ ವಯಸ್ಸನ್ನು 18ಕ್ಕೆ ಇಳಿಸಿದಾಗ ಬೇರೆ ಪಕ್ಷದವರು ಇದನ್ನು ಪ್ರಶ್ನಿಸಿದ್ದರು. ಆದರೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪಾಲ್ಗೊಳ್ಳಲು ಪರಿಗಣಿಸದಿದ್ದರೆ ಅವರಿಗೆ ಅನ್ಯಾಯ ಮಾಡಿದಂತೆ ಎಂದು ರಾಜೀವ್ ಗಾಂಧಿ ಹೇಳಿದ್ದರು. ಆ ಮೂಲಕ ಯುವ ಶಕ್ತಿಯ ಮೇಲೆ ಅಪಾರ ನಂಬಿಕೆ, ವಿಶ್ವಾಸ ಇಟ್ಟಿದ್ದರು. ಇಂದು ತಂತ್ರಜ್ಞಾನವನ್ನು ನಾವು ಬಹಳ ದೊಡ್ಡ ಮಟ್ಟದಲ್ಲಿ ಬಳಸುತ್ತಿದ್ದೇವೆ. ಇದಕ್ಕೆ ಅಡಿಪಾಯ ಹಾಕಿದ್ದೇ ರಾಜೀವ್ ಗಾಂಧಿ ಅವರು ಎಂದು ಹೇಳಿದರು.

**ಅಧ್ಯಕ್ಷನಾದರೂ ನಾನೊಬ್ಬ ಸಾಮಾನ್ಯ ಕಾರ್ಯಕರ್ತ:–** ತಮ್ಮ ಸಂಕಷ್ಟದ ದಿನಗಳನ್ನು ನೆನೆಪಿಸಿಕೊಂಡ ಶಿವಕುಮಾರ್ "ನನ್ನ ರಾಜಕೀಯ ಬದುಕು ಮುಗಿಯಿತು. ಬಿಜೆಪಿಯವರ ಕುತಂತ್ರದಿಂದಾಗಿ ನನ್ನ ರಾಜಕೀಯ ಅಂತ್ಯವಾಯಿತು ಎನ್ನುವ ಮಾತು ಕೇಳಿಬಂದಿದ್ದ ಸಂದರ್ಭದಲ್ಲಿ ಸೋನಿಯಾ ಗಾಂಧಿ ಅವರು ತಿಹಾರ್ ಜೈಲಿಗೆ ಬಂದು ನನ್ನನ್ನು ತಮ್ಮ ಸಹೋದರನಂತೆ ಕಂಡು, ಒಂದು ಗಂಟೆಗಳ ಕಾಲ ಧೈರ್ಯ ತುಂಬಿ ಈಗ ನನ್ನನ್ನು ಈ ಸ್ಥಾನದಲ್ಲಿ ನಿಲ್ಲಿಸಿದ್ದಾರೆ. ನಾನು ಅಧ್ಯಕ್ಷನಾದರೂ ಪಕ್ಷದ ಒಬ್ಬ ಸಾಮಾನ್ಯ ಕಾರ್ಯಕರ್ತ, ಯಾವುದೇ ಗುಂಪುಗಾರಿಕೆ ಮೇಲೆ ನನಗೆ ನಂಬಿಕೆ ಇಲ್ಲ. ಯಾವುದೇ ಧರ್ಮ, ಜಾತಿ ಭೇದ–ಭಾವ ನನಗಿಲ್ಲ. ನಾನು ನಂಬುವುದು ಕೇವಲ ಕಾಂಗ್ರೆಸ್ ಧರ್ಮವನ್ನು ಮಾತ್ರ. ಈ ನಿಟ್ಟಿನಲ್ಲಿ ನಾವೆಲ್ಲರೂ ಹೆಜ್ಜೆ ಹಾಕಬೇಕು ಎಂದು ಹೇಳಿದರು. ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಕೆ.ಸಿ.ವೇಣುಗೋಪಾಲ್ ಜೊತೆ ಸುದೀರ್ಘ ಚರ್ಚೆ ಮಾಡಿ, ರಾಜ್ಯದ ಎಲ್ಲಾ ನಾಯಕರ ಸಲಹೆ ಪಡೆದು ನನಗೆ ಜವಾಬ್ದಾರಿ ಕೊಟ್ಟು ನಿಮ್ಮ ಮುಂದೆ ನಿಲ್ಲಿಸಿದ್ದಾರೆ. ನನಗೆ ಅಧ್ಯಕ್ಷ ಸ್ಥಾನದ ಹಂಬಲ ಇಲ್ಲ. ಆದರೆ ಸವಾಲು ಎದುರಿಸಲು ಉತ್ಸಾಹವಿದೆ. ಸೋನಿಯಾ ಗಾಂಧಿ ಅವರು ಯಾವ ಸಂದರ್ಭದಲ್ಲಿ ನನಗೆ ಈ ಶಕ್ತಿ ಕೊಟ್ಟರು ಎಂಬುದನ್ನು ಮರೆಯಲು ಸಾಧ್ಯವಿಲ್ಲ ಎಂದು ಭಾವುಕರಾಗಿ ನುಡಿದರು.

ಆಧಾರ:ಉದಯವಾಣಿ, ದಿನಾಂಕ:03.07.2020